## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ನೋಂದಾಯಿತ ಫಲಾನುಭವಿಗಳಿಗೆ ಅಪಘಾತ ಮರಣ ಪರಿಹಾರವನ್ನು ವಿಮಾ ಸಂಸ್ಥೆಯ ಬದಲಾಗಿ ನೇರವಾಗಿ ಮಂಡಳಿಯ ಮೂಲಕ ನೀಡುವ ಬಗ್ಗೆ.

**ಓದಲಾಗಿದೆ:-** (1) ಸರ್ಕಾರದ ಆದೇಶ ಸಂಖ್ಯೆ: ಕಾಇ 269 ಎಲ್‌ಇಟಿ 2016, ದಿನಾಂಕ: 13-10-2016.

(2) ಸರ್ಕಾರದ ಆದೇಶ ಸಂಖ್ಯೆ: ಕಾಇ 267 ಎಲ್‌ಇಟಿ 2017, ದಿನಾಂಕ: 23-08-2017.

(3) ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಪತ್ರ ಸಂಖ್ಯೆ: ಅಸಂಕಾ/ಅಪಯೋ./ಸಿ.ಆರ್-02/2017-18, ದಿನಾಂಕ: 19-09-2019.

**ಪ್ರಸ್ತಾವನೆ:-**

ಕ್ರಮ ಸಂಖ್ಯೆ (1)ರಲ್ಲಿ, ಓದಲಾದ ಸರ್ಕಾರದ ಆದೇಶದಲ್ಲಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಖಾಸಗಿ ವಾಣಿಜ್ಯ ವಾಹನಗಳಾದ ಆಟೋ, ಟ್ಯಾಕ್ಸಿ, ಮ್ಯಾಕ್ಸಿಕ್ಯಾಬ್, ಲಾರಿ ಹಾಗೂ ಬಸ್ ಚಾಲಕರುಗಳಿಗೆ, ಖಾಸಗಿ ವಾಹನ ಚಾಲಕರು ಸೇರಿದಂತೆ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರಿಗೆ. ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೂ ಸಹ ಅನ್ವಯವಾಗುವಂತೆ ಅಪಘಾತ ವಿಮಾ ಪರಿಹಾರ ಸೌಲಭ್ಯವನ್ನು ಒದಗಿಸುವುದಕ್ಕಾಗಿ " ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ " ಯನ್ನು ಜಾರಿಮಾಡಲಾಗಿದೆ.

ಕ್ರಮ ಸಂಖ್ಯೆ (2)ರಲ್ಲಿ, ಓದಲಾದ ಸರ್ಕಾರದ ಆದೇಶದಲ್ಲಿ, ಈ ಯೋಜನೆಯಡಿ ನೋಂದಾಯಿತ ಫಲಾನುಭವಿಗಳ ಅಪಘಾತ ಮರಣ ಪ್ರಕರಣಗಳಲ್ಲಿ ನೀಡುತ್ತಿರುವ ಪರಿಹಾರದ ಮೊತ್ತವನ್ನು ರೂ.2.00 ಲಕ್ಷಗಳಿಂದ ರೂ.5.00 ಲಕ್ಷಗಳಿಗೆ ಹೆಚ್ಚಿಸಿ ಪರಿಷ್ಕರಿಸಲಾಗಿದೆ.

ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಪತ್ರದಲ್ಲಿ ಈ ಅಪಘಾತ ಪರಿಹಾರವನ್ನು ಫಲಾನುಭವಿಗಳಿಗೆ ಕೆ.ಟಿ.ಪಿ.ಪಿ. ಕಾಯ್ದೆ, 1999ರ ಪ್ರಾವಧಾನಗಳನ್ವಯ ಆಯ್ಕೆ ಮಾಡಿ ವಿಮಾ ಸಂಸ್ಥೆಯ ಮೂಲಕ ನೀಡಲಾಗುತ್ತಿದ್ದು, ಈವರೆಗೆ ಆಯ್ಕೆಗೊಂಡ ವಿಮಾ ಸಂಸ್ಥೆಗಳಿಗೆ ಬಿಡುಗಡೆಗೊಳಿಸಿದ ಒಟ್ಟು ಮೊತ್ತದಲ್ಲಿ ಸುಮಾರು ಶೇ.30-35 ರಷ್ಟು ಮೊತ್ತವು ಮಾತ್ರ ಫಲಾನುಭವಿಗಳಿಗೆ ಪಾವತಿಸುವುದು ಕಂಡು ಬಂದಿರುತ್ತದೆ. ಆದ್ದರಿಂದ ಈ ಅಪಘಾತ ಪರಿಹಾರವನ್ನು ನೀಡಲು ಆಯ್ಕೆ ಮಾಡಿಕೊಳ್ಳಲಾಗಿದ್ದ ಮೆ॥ ದಿ ನ್ಯೂ ಇಂಡಿಯಾ ಅಶ್ಯೂರೆನ್ಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಒಪ್ಪಂದವು ದಿನಾಂಕ: 30-11-2018ಕ್ಕೆ ಅಂತ್ಯಗೊಂಡಿದ್ದು, ದಿನಾಂಕ: 20-03-2018ರಂದು ನಡೆದ ಮಂಡಳಿಯ 11ನೇ ಸಾಮಾನ್ಯ ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ಅಪಘಾತ ಮರಣ ಪರಿಹಾರವನ್ನು ವಿಮಾ ಸಂಸ್ಥೆಯ ಬದಲಾಗಿ ಮಂಡಳಿಯಿಂದಲೇ ನೇರವಾಗಿ ಫಲಾನುಭವಿಗಳಿಗೆ ವಿತರಿಸಲು ನಿರ್ಧರಿಸಲಾಗಿದ್ದು, ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಅಪಘಾತ ಪರಿಹಾರ ಸೌಲಭ್ಯವನ್ನು ದಿನಾಂಕ; 01/12/2018ರಿಂದ ಅನ್ವಯವಾಗುವಂತೆ ಫಲಾನುಭವಿಗಳಿಗೆ ನೇರವಾಗಿ ಮಂಡಳಿಯ ಮೂಲಕ ಪಾವತಿಸಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

-2-

ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಇವರ ಪ್ರಸ್ತಾವನೆಯನ್ನು ಪರಿಶೀಲಿಸಿದೆ, ಸರ್ಕಾರವು ಈ ಕೆಳಗಿನಂತೆ ಆದೇಶ ಹೊರಡಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಕಾಇ 267 ಎಲ್ಇಟಿ 2017,</u>
<u>ದಿನಾಂಕ/20/03/2020.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, "ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ನೋಂದಾಯಿತ ಫಲಾನುಭವಿಗಳಿಗೆ ಅಪಘಾತ ಮರಣ ಪರಿಹಾರ ಸೌಲಭ್ಯವನ್ನು ದಿನಾಂಕ: 01-12-2018 ರಿಂದ ಪೂರ್ವಾನ್ವಯವಾಗುವಂತೆ ವಿಮಾ ಸಂಸ್ಥೆಯ ಬದಲಾಗಿ ನೇರವಾಗಿ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯ ಮೂಲಕ ಪಾವತಿಸಲು ಅನುಮೋದನೆ ನೀಡಲಾಗಿದೆ".

ಈ ಆದೇಶವನ್ನು ಸಚಿವ ಸಂಪುಟದ ಪ್ರಕರಣ ಸಂಖ್ಯೆ: ಸಿ: 118/2020, ದಿನಾಂಕ; 11/03/2020ರಲ್ಲಿ ನೀಡಿರುವ ಅನುಮೋದನೆ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

20.3.2020
( ಡಿ.ಧನಂಜಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಾರ್ಮಿಕ ಇಲಾಖೆ.

<u>ಇವರಿಗೆ</u>

1) ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಈ-ಗೆಜೆಟ್‌ನಲ್ಲಿ ಪ್ರಕಟಿಸಲು ಕೋರಿದೆ.
2) ಮಹಾಲೇಖಪಾಲರು( ಲೆಕ್ಕಪತ್ರ ಮತ್ತು ಲೆಕ್ಕ ಪರಿಶೋಧನೆ) ಹೊಸ ಕಟ್ಟಡ, ಕರ್ನಾಟಕ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿ(ಆಯವ್ಯಯ ಮತ್ತು ಸಂಪನ್ಮೂಲ), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4) ಆಯುಕ್ತರು, ಕಾರ್ಮಿಕ ಇಲಾಖೆ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.

<u>ಪ್ರತಿಯನ್ನು</u>

1) ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2) ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು. (ಪ್ರಕರಣ ಸಂಖ್ಯೆ: ಸಿ: 118/2020)

3) ಜಂಟಿ ಕಾರ್ಮಿಕ ಆಯುಕ್ತರು ಹಾಗೂ ಜಂಟಿ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಕಲ್ಯಾಣ ಸುರಕ್ಷಾ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.

4) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.

5) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಶಾಖೆ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.

6) ಶಾಖಾ ರಕ್ಷಾ ಕಡತ